ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:2367/2022

ಚಾಸಾ:11 ಪ್ರಾಸಾ:5

ದಿನಾಂಕ: 09.07.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ವಿಜಯೇಂದ್ರ |
| ತಂದೆಯ ಹೆಸರು | : | ಬಚ್ಚು ದೇವಾಡಿಗ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಹೊಟೇಲ್ ಕೆಲಸ |
| ವಾಸ ಸ್ಥಳ | : | ಬಂಟ್ವಾಡಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ನಿಪಿ-2 ಮತ್ತು 3ನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಮತ್ತು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು 2018ರಲ್ಲಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಆ ಸಮಯದಲ್ಲಿ ಚಾಸಾ-12 ರವರು ಹಾಜರು ಇದ್ದರು. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಸಾಕ್ಷಿ ನಿಪಿ-4 ನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಬಂಟ್ವಾಡಿ ಮೀನು ಮಾರುಕಟ್ಟೆ ಬಳಿ ತೆಗೆಯಲಾಯಿತು. ಸದ್ರಿ ಪೋಟೋದಲ್ಲಿ ಪ್ರಾಸಾ-1ರವರು ಜಾಗವನ್ನು ತೋರಿಸುತ್ತಿದ್ದರು. ಆಗ ಸಂಜೆ ಸುಮಾರು 5 ಗಂಟೆಯಾಗಿತ್ತು. ಪೋಟೋ ತೆಗೆಯುವ ವೇಳೆಗೆ ನಿಪಿ-2 ಮತ್ತು 3 ರಂತೆ ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:13-08-2022 ರಂದು ಮೇಲಿನ ದಾಖಲೆಗಳಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಪಂಚನಾಮೆಯನ್ನು ಮಧ್ಯಾಹ್ನ 3 ರಿಂದ 4-30ರವರೆಗೂ ಘಟನಾ ಸ್ಥಳದಲ್ಲಿ

ಬರೆದಿರುತ್ತಾರೆ ಎಂದರೆ ಇರಬಹುದು. ಅನಂತರ ನಾನು ಚಾಸಾ-1 ಮತ್ತು 12 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಕೆ ಎಸ್ ಎನ್ ರವರಿಂದಃ**

ನಿಪಿ-4 ರಲ್ಲಿ ಡಾಂಬಾರು ರಸ್ತೆ ತೋರಿಸುತ್ತಿರುವುದು ಕಂಡು ಬರುತ್ತದೆ ಎಂದರೆ ಸರಿ. ಅಲ್ಲಿ ಅಪಘಾತವಾದ ಬಗ್ಗೆ ಯಾವುದೇ ಕುರುಹು ಇಲ್ಲ ಎಂದರೆ ನನಗೆ ತಿಳಿದಿಲ್ಲ. ಜಾಗವನ್ನು ತೋರಿಸಿದ ನಂತರ ನಿಪಿ-2 ಮತ್ತು 3ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿ. ನನ್ನೊಂದಿಗೆ ಚಾಸಾ-12 ರವರು ಸಹಿ ಮಾಡಿರುತ್ತಾರೆ.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**